# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 130 |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 09.12.2024 |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಬೆಳಗಾವಿ, ಬಾಗಲಕೋಟೆ ಮತ್ತು ವಿಜಯಪುರ ಜಿಲ್ಲೆಗಳಲ್ಲಿನ ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆಯಲ್ಲಿ ಎ.ಪಿ.ಎಲ್ ಮತ್ತು ಬಿ.ಪಿ.ಎಲ್.ನ ಹೊಸ ಪಡಿತರ ಚೀಟಿಗಳಾಗಲಿ, ತಿದ್ದುಪಡಿಗಳಾಗಲಿ ಅಥವಾ ವಿಳಾಸ ಬದಲಾವಣೆಯಾಗಲಿ ಮಾಡದೇ ಇರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರದ ಕ್ರಮಗಳೇನು; | ಹೊಸ ಆದ್ಯತಾ ಪಡಿತರ ಚೀಟಿಯನ್ನು ಕೋರಿ ಸೆಪ್ಟಂಬರ್-2023ರ ಮಾಹೆಯವರೆವಿಗೂ ಸಲ್ಲಿಸಿದ್ದ 2,95,986 ಅರ್ಜಿಗಳ ವಿಲೇವಾರಿ ಬಗ್ಗೆ ಸರ್ಕಾರದ ಆದೇಶ ಸಂಖ್ಯೆ: ಆನಾಸ 211 ಡಿಆರ್‌ಎ 2021, ದಿನಾಂಕ: 29.09.2023 ರಂದು ಆದೇಶಿಸಿಲಾಗಿರುತ್ತದೆ. ಬಾಕಿ ಇರುವ ಹೊಸ ಆದ್ಯತಾ ಪಡಿತರ ಚೀಟಿಗಳನ್ನು ವಿಲೇ ಮಾಡಲು ಕ್ರಮವಹಿಸಲಾಗುತ್ತಿದೆ.<br>ಪ್ರಸ್ತುತ NIC ವತಿಯಿಂದ ಆಹಾರ ತಂತ್ರಾಂಶ ನಿರ್ವಹಣೆಯನ್ನು ನಡೆಸುತ್ತಿದ್ದು ಬೆಂಗಳೂರು, ಮೈಸೂರು, ಕಲಬುರಗಿ, ಪ್ರದೇಶಗಳಿಗೆ 3 ಸರ್ವರ್‌ಗಳನ್ನು ಬಳಸಲಾಗುತ್ತಿದೆ. ಆದರೆ, ಹಾಲಿ ನಿರ್ವಹಿಸುತ್ತಿರುವ ಸರ್ವರ್‌ಗಳು ಹಳೆಯದಾಗಿದ್ದು ಹೆಚ್ಚಿನ ಒತ್ತಡ ಹೊರಲು ಸಾಧ್ಯವಾಗದ ಕಾರಣ ಈಗ ಕಾರ್ಯನಿರ್ವಹಿಸುತ್ತಿರುವ ಸರ್ವರ್ ಗಳಲ್ಲಿ ಹೆಚ್ಚು ಕಾರ್ಯಭಾರವನ್ನು ನಿರ್ವಹಿಸಲು ಸಾಧ್ಯವಾಗುತ್ತಿರುವುದಿಲ್ಲ.<br>ಈ ಕಾರಣದಿಂದಾಗಿ ಎನ್.ಐ.ಸಿ ಯಿಂದ ಕೆ.ಎಸ್.ಡಿ.ಸಿ (Karnataka State Data Centre) ಗೆ ಆಹಾರ ತಂತ್ರಾಂಶದ Migration ಕಾರ್ಯವು ಪ್ರಗತಿಯಲ್ಲಿರುತ್ತದೆ. ಎನ್.ಐ.ಸಿ ಯಿಂದ ಕೆ.ಎಸ್.ಡಿ.ಸಿ 'ಗೆ Migration ಕಾರ್ಯ ಪೂರ್ಣಗೊಂಡ ನಂತರ ಹೊಸ ಆದ್ಯತಾ ಪಡಿತರ ಚೀಟಿ ಕೋರಿ ಸಲ್ಲಿಸಿರುವ ಅರ್ಜಿಗಳ ವಿಲೇವಾರಿಗೆ ಸರ್ಕಾರದಿಂದ ಅನುಮತಿ ಪಡೆದ ನಂತರ ಕ್ರಮವಹಿಸಲಾಗುವುದು. ಹಾಲಿ ಪಡಿತರ ಚೀಟಿಯಲ್ಲಿನ ಹೆಸರು ಸೇರ್ಪಡೆ/ತಿದ್ದುಪಡಿಗೆ ಪ್ರತಿ ತಿಂಗಳ 1 |

| | | |
|---|---|---|
| | | ರಿಂದ 10 ನೇ ತಾರಿಖೀನವರೆಗೆ ಅವಕಾಶವನ್ನು ನೀಡಲಾಗುತ್ತಿದೆ. ಹಾಗೂ ತುರ್ತು ವೈದ್ಯಕೀಯ ಪರಿಸ್ಥಿತಿ ಇರುವ ಅರ್ಹ ಫಲಾನುಭವಿಗಳಿಗೆ ಹೊಸ ಆದ್ಯತಾ ಪಡಿತರ ಚೀಟಿ ನೀಡಲು ನಿರಂತರವಾಗಿ ಅವಕಾಶವನ್ನು ಕಲ್ಪಿಸಲಾಗಿರುತ್ತದೆ. |
| ಆ | ರೋಗಿಗಳು ಆಸ್ಪತ್ರೆಗಳಿಗೆ ನೀಡಲು ಹಾಗೂ ಸಾರ್ವಜನಿಕರು ತಮ್ಮ ಸರ್ಕಾರಿ ಕೆಲಸ ಕಾರ್ಯಗಳಿಗಾಗಿ ಸಂಬಂಧಪಟ್ಟ ಆಹಾರ ಪಡಿತರ ಅಧಿಕಾರಿಗಳನ್ನು ಸಂಪರ್ಕಿಸಿದಾಗ ಸದರಿ ಅಧಿಕಾರಿಗಳು ಇಲಾಖೆಯ ವೆಬ್‌ಸೈಟ್ ಲಾಕ್ ಆಗಿದೆ ಎಂದು ಉತ್ತರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ಒದಗಿಸುವುದು) | ವೈದ್ಯಕೀಯ ತುರ್ತು ಪರಿಸ್ಥಿತಿ ಹಿನ್ನಲೆಯಲ್ಲಿ ಅರ್ಹರಿಂದ ಹೊಸ ಆದ್ಯತ ಪಡಿತರ ಚೀಟಿ ನೀಡಲು ಹಾಗೂ ಆದ್ಯತ ಪಡಿತರ ಚೀಟಿಯಲ್ಲಿ ತಿದ್ದುಪಡಿ ಮಾಡಲು ನಿರಂತರವಾಗಿ ಅವಕಾಶವನ್ನು ಕಲ್ಪಿಸಲಾಗಿರುತ್ತದೆ. |
| ಇ | ಲಾಕ್ ಆಗಿರುವ ವೆಬ್‌ಸೈಟ್‌ನ ಲಾಕ್‌ನ್ನು ತೆರವುಗೊಳಿಸಿ ಸಾರ್ವಜನಿಕರಿಗೆ ಪಡಿತರ ಚೀಟಿ ವಿತರಿಸಲು ಯಾವ ಕಾಲಮಿತಿಯೊಳಗೆ ಕ್ರಮ ಕೈಗೊಳ್ಳಲಾಗುವುದು? | ಎನ್.ಐ.ಸಿ ಯಿಂದ ಕೆ.ಎಸ್.ಡಿ.ಸಿ 'ಗೆ Migration ಕಾರ್ಯವು ಅಂತಿಮ ಹಂತದಲ್ಲಿದ್ದು, ಸದರಿ ಪ್ರಕ್ರಿಯೆ ಪೂರ್ಣಗೊಂಡ ನಂತರ ಹೊಸ ಆದ್ಯತಾ ಪಡಿತರ ಚೀಟಿ ಕೋರಿ ಸಲ್ಲಿಸಿರುವ ಅರ್ಜಿಗಳ ವಿಲೇವಾರಿಗೆ ಕ್ರಮವಹಿಸಲಾಗುತ್ತದೆ.. |

ಆನಾಸ 350 ಡಿಆರ್‌ಎ 2024

(ಕೆ.ಹೆಚ್. ಮುನಿಯಪ್ಪ)

ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ

ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ

ಇಲಾಖಾ ಸಚಿವರು